ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅರಣ್ಯ ಪ್ರದೇಶದ ಹಂಚಿನಲ್ಲಿರುವ ಭೂಮಿಯನ್ನು ಸರ್ಕಾರ ಕೊಂಡು ಕೊಳ್ಳುವ ಬಗ್ಗೆ

ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

863 (964) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅರಣ್ಯ ಪ್ರದೇಶದ ಹಂಚಿನಲ್ಲಿರುವ ರೈತರು/ಖಾಸಗಿಯವರು ಅಲ್ಲಿ ಬೆಳೆಗಳನ್ನು ಬೆಳೆಯಲು ಸಾಧ್ಯವಾಗದೆ ತಮ್ಮ ಜಮೀನುಗಳನ್ನು ಅರಣ್ಯ ಇಲಾಖೆ ಮಾರಾಟ ಮಾಡಲು ತಯಾರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದ್ದಲ್ಲಿ ಇಂತಹ ಖಾಸಗೀಯವರಿಂದ ಜಮೀನುಗಳನ್ನು ಕೊಳ್ಳಲು ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಇಂತಹ ಭೂಮಿಗಳನ್ನು ಕೊಂಡುಕೊಂಡಿದ್ದಲ್ಲಿ ಅದರ ವಿಸ್ತೀರ್ಣ, ಎಕರೆಗೆ ನೀಡಲಾದ ದರಗಳ ಬಗೆಗಿನ ; (ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಯಾವುದಾದರೂ ಇವೆಯೇ; ಇದ್ದಲ್ಲಿ ಈ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿ ಏನು; (ಪೂರ್ಣ ವಿವರಗಳನ್ನು ನೀಡುವುದು)

(ಈ) ಇಂತಹ ಪ್ರಕರಣಗಳಿಗೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ನೀಡಲಾಗಿರುವ ಅನುದಾನವೆಷ್ಟು ? (ವಿವರ ನೀಡುವುದು)